All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

03.11.2026 6.40 p.m.

<><><><>

ಮುಖ್ಯಾಂಶಗಳು

- ಚಿತ್ರದುರ್ಗದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ
- ರಾಜ್ಯದ ವಿವಿಧೆಡೆ ಕಬ್ಬು ಬೆಳೆಗಾರರ ಪ್ರತಿಭಟನೆ ; ೭೫೦ ರೂಪಾಯಿ ಹೆಚ್ಚುವರಿ ಬೆಂಬಲ ಬೆಲೆ ನೀಡುವಂತೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆಗ್ರಹ
- ವಕೀಲರ ರಕ್ಷಣಾ ಕಾಯ್ದೆ ಬಲಪಡಿಸುವಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ವಕೀಲರ ಸಂಘ ಮನವಿ
- ೨೦೨೮ರಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ರಚಿಸುವ ಗುರಿ ; ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ ಭರವಸೆ
- ಇದೇ ೫ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಚುನಾವಣಾ ಅಕ್ರಮದ ವಿರುದ್ಧ ಇಂಡಿ ಒಕ್ಕೂಟದಿಂದ ಪ್ರತಿಭಟನೆ

<><><><>

ರಾಜ್ಯದಲ್ಲಿ ವಾಸಕ್ಕೆ ಮನೆಗಳಿಲ್ಲದ ೫ ಲಕ್ಷ ಮಂದಿಗೆ ಈ ವರ್ಷವೇ ನಿವೇಶನ ಹಂಚಿಕೆ ಮಾಡಲು ನಿರ್ಣಯ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಚಿತ್ರದುರ್ಗದ ಹಿರಿಯೂರು ತಾಲೂಕಿನ ಧರ್ಮಪುರ ಗ್ರಾಮದಲ್ಲಿ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಶಂಕುಸ್ಥಾಪನೆ ಹಾಗೂ ವಿವಿಧ ಅಭಿವೃದ್ಧಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಒಂದು ವೇಳೆ ಜಾಗವಿಲ್ಲದಿದ್ದರೆ, ಖಾಸಗಿ ಜಮೀನು ಖರೀದಿ ಮಾಡಿ ಎಲ್ಲರಿಗೂ ನಿವೇಶನ ಹಾಗೂ ಮನೆ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗಿದೆ ಎಂದು ಹೇಳಿದ್ದಾರೆ.

ಹಿರಿಯೂರು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ೨ ಸಾವಿರದ ೨೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬಳಿಕ ಮುಖ್ಯಮಂತ್ರಿ, ಹಿರಿಯೂರಿನ ದಿಂಡವಾರದಲ್ಲಿ ಜವನಗೊಂಡನ ಹಳ್ಳಿ ಹೋಬಳಿಯ ೧೬ ಕೆರೆಗಳು ಹಾಗೂ ಗಾಯತ್ರಿ ಜಲಾಶಯಕ್ಕೆ ನೀರು ತುಂಬಿಸುವ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

<><><><>

ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹೋರಾಟ ತೀವ್ರಗೊಂಡಿದೆ. ಪ್ರತಿ ಟನ್ ಕಬ್ಬಿಗೆ ೫ ಸಾವಿರದ ೫೦೦ ರೂಪಾಯಿ ಖರೀದಿ ದರ ನೀಡಬೇಕೆಂದು ಆಗ್ರಹಿಸಿ, ರಾಜ್ಯದೆಲ್ಲೆಡೆ ಕಬ್ಬು ಬೆಳೆಗಾರರು

ಪ್ರತಿಭಟನೆ ತೀವ್ರಗೊಳಿಸಿದ್ದಾರೆ. ಮೈಸೂರಿನಲ್ಲಿ ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಮತ್ತು ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ್ದಾರೆ. ಸಕ್ಕರೆಯ ಕನಿಷ್ಠ ಮಾರಾಟ ದರವನ್ನು ಪ್ರತಿ ಕೆ.ಜಿ.ಗೆ ಪ್ರಸ್ತುತ ಇರುವ ೩೧ ರೂಪಾಯಿಯಿಂದ ೪೦ ರೂಪಾಯಿಗೆ ಹೆಚ್ಚಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್‌ಗೆ ೪ ಸಾವಿರದ ೫೦೦ ರೂಪಾಯಿ ಪಾವತಿಸಬೇಕು ಮತ್ತು ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ೧ ಸಾವಿರ ರೂಪಾಯಿ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಇನ್ನೊಂದೆಡೆ ಬೆಳಗಾವಿಯಲ್ಲಿ ಜೈಲ್ ಭರೋ ಚಳುವಳಿ ಆರಂಭಿಸಿದ್ದಾರೆ. ಖೈದಿ ಸಂಖ್ಯೆ ೫ ಸಾವಿರದ ೫೦೦ ಎಂದು ಬರೆದ ಟಿ-ಶರ್ಟ್‌ಗಳನ್ನು ಧರಿಸಿದ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಇನ್ನೊಂದೆಡೆ ಪ್ರತಿ ಟನ್ ಕಬ್ಬಿಗೆ ೫ ಸಾವಿರದ ೫೦೦ ರೂಪಾಯಿ ಬೆಲೆ ನಿಗದಿಪಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ರೈತರು ಬಾಗಲಕೋಟೆ ತಾಲೂಕಿನ ಗದ್ದನಕೇರಿ ಕ್ರಾಸ್‌ನಲ್ಲಿ ಇಂದು ರಸ್ತೆ ತಡೆ ನಡೆಸಿದರು. ಈ ಎಲ್ಲಾ ಬೆಳವಣಿಗೆಗಳ ನಡುವೆ ಕಬ್ಬಿನ ಬೆಲೆ ನಿಗದಿ ಕುರಿತಂತೆ ಬೆಳಗಾವಿಯಲ್ಲಿ ಜಿಲ್ಲಾಧಿಕಾರಿ ಹಾಗೂ ಸಚಿವ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ರೈತರು, ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ಅಧಿಕಾರಿಗಳು ರೈತರ ಮನವೊಲಿಸಲು ಪ್ರಯತ್ನಿಸುತ್ತಿದ್ದಾರೆ.

<><><><>

ರಾಜ್ಯದಲ್ಲಿ ಕಬ್ಬು ಬೆಳೆಗಾರರು ಸೂಕ್ತ ಬೆಲೆ ನಿಗದಿಗಾಗಿ ನಿರಂತರವಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರ ಕಣ್ಮುಚ್ಚಿ ಕುಳಿತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ರೈತರ ಸಂಕಷ್ಟಕ್ಕೆ ಸ್ಪಂದಿಸಿ ಪ್ರತಿ ಟನ್ ಕಬ್ಬಿಗೆ ೭೫೦ ರೂಪಾಯಿ ಹೆಚ್ಚುವರಿ ಬೆಂಬಲ ಬೆಲೆ ಒದಗಿಸುವುದು ರಾಜ್ಯ ಸರ್ಕಾರದ ಹೊಣೆಯಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಆರ್ಥಿಕ ಪರಿಸ್ಥಿತಿ ಸಂಪೂರ್ಣ ಹದಗೆಟ್ಟಿದ್ದು, ಗುತ್ತಿಗೆದಾರರಿಗೆ ೩೮ ಸಾವಿರ ಕೋಟಿ ರೂಪಾಯಿ ಪಾವತಿಸಬೇಕಿದೆ ಎಂದು ಹೇಳಿದ್ದಾರೆ. ಹಿರಿಯೂರು ವಿಧಾನಸಭಾ ಉಪಚುನಾವಣೆಗೆ ಸಂಬಂಧಿಸಿದಂತೆ ಒಮ್ಮತದ ಎನ್‌ಡಿಎ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಕುರಿತಂತೆ ಬಿಜೆಪಿ ನಾಯಕರೊಂದಿಗೆ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ವಕೀಲರ ಮೇಲಿನ ಹಲ್ಲೆ, ಹಾಗೂ ದೌರ್ಜನ್ಯ ಖಂಡಿಸಿ, ವಕೀಲರ ಸಂರಕ್ಷಣಾ ಕಾಯ್ದೆಯನ್ನು ಬಲಪಡಿಸಲು ಒತ್ತಾಯಿಸಿ ಇಂದು ರಾಜ್ಯದ ಹಲವೆಡೆ ಕಲಾಪ ತ್ಯಜಿಸಿ ವಕೀಲರು ಪ್ರತಿಭಟನೆ ನಡೆಸಿದರು. ಧಾರವಾಡ ವಕೀಲರ ಸಂಘದಲ್ಲಿ ವಕೀಲರ ಮೇಲೆ ನಡೆಯುತ್ತಿರುವ ಹಲ್ಲೆ ಹಾಗೂ ದೌರ್ಜನ್ಯ ಖಂಡಿಸಲಾಯಿತು. ಧಾರವಾಡದ ಎಲ್ಲಾ ನ್ಯಾಯಾಲಯಗಳ ಕಾರ್ಯಕಲಾಪಗಳಿಂದ

ದೂರ ಉಳಿದ ವಕೀಲರು ಜುಬಿಲಿ ಸರ್ಕಲ್ ನಲ್ಲಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಇನ್ನೊಂದೆಡೆ ವಕೀಲರ ರಕ್ಷಣಾ ಕಾಯ್ದೆಯನ್ನು ಮತ್ತಷ್ಟು ಬಲಪಡಿಸುವುದು ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಬೆಂಗಳೂರು ವಕೀಲರ ಸಂಘದ ಪದಾಧಿಕಾರಿಗಳು ಇಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮನವಿ ಸಲ್ಲಿಸಿದರು. ವಕೀಲರಾದ ಮಂಜುನಾಥ್, ಶ್ರೀರಾಮ್ ಹತ್ಯೆ ಹಾಗೂ ಗೌರಿಬಿದನೂರಿನ ವೆಂಕಟ್ರಮಣ ಸನ್ನಕ್ಕಿ ಅವರ ಮೇಲಿನ ಕೊಲೆ ಯತ್ನದ ಪ್ರಕರಣಗಳ ಆರೋಪಿಗಳನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸಿವಿಲ್ ವ್ಯಾಜ್ಯಗಳಲ್ಲಿ ಪೊಲೀಸರು ಅನಧಿಕೃತವಾಗಿ ಮಧ್ಯಪ್ರವೇಶಿಸಿ ಇತ್ಯರ್ಥಪಡಿಸುವುದಕ್ಕೆ ಕಡಿವಾಣ ಹಾಕಬೇಕು. ಈ ಸಂಬಂಧ ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಪಾಲಿಸದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು. ಮನವಿ ಸ್ವೀಕರಿಸಿದ ಸಚಿವ ಪ್ರಿಯಾಂಕ್ ಖರ್ಗೆ ವಕೀಲರ ಸಂಘದ ಬೇಡಿಕೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ.

<><><><>

ಕರ್ನಾಟಕದ ತಂತ್ರಜ್ಞಾನ ಮತ್ತು ನಾವೀನ್ಯತೆ ವಲಯವನ್ನು ಸಾಂಪ್ರದಾಯಿಕ ಐಟಿ ಕ್ಷೇತ್ರಗಳಾಚೆಗೆ ವಿಸ್ತರಿಸಿ, ಜಾಗತಿಕ ಕ್ರಿಯಾಶೀಲ ತಂತ್ರಜ್ಞಾನ ಕೇಂದ್ರವಾಗಿ ರೂಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆಯಿಟ್ಟಿದೆ. ಅನಿಮೇಷನ್, ದೃಶ್ಯ ಪರಿಣಾಮಗಳು, ಡಿಜಿಟಲ್ ಸಿನಿಮಾ, ಗೇಮಿಂಗ್, ವರ್ಚುವಲ್ ಮತ್ತು ಆಗ್ಮೆಂಟೆಡ್ ರಿಯಾಲಿಟಿ ಸೇರಿದಂತೆ ಸೃಜನಶೀಲ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕರ್ನಾಟಕ ಮತ್ತು ಫಿನ್‌ಲ್ಯಾಂಡ್‌ನ ಟ್ಯಾಂಪೆರೆ ನಡುವೆ ಇಂದು ಒಪ್ಪಂದದ ಉದ್ದೇಶ ಪತ್ರಕ್ಕೆ ಸಹಿ ಹಾಕಲಾಗಿದೆ. ಗ್ಲೋಬಲ್ ಇನ್ನೋವೇಷನ್ ಅಲಯನ್ಸ್ ಉಪಕ್ರಮದಡಿ ರೂಪಿಸಲಾಗುತ್ತಿರುವ ಈ ಸಹಯೋಗವು ಕರ್ನಾಟಕ ಮತ್ತು ಟ್ಯಾಂಪೆರೆ ನಡುವೆ ಜಾಗತಿಕ ಕ್ರಿಯಾಶೀಲ ಆರ್ಥಿಕ ಕಾರಿಡಾರ್ ನಿರ್ಮಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ಬೆಳವಣಿಗೆಯ ಕುರಿತು ಪ್ರತಿಕ್ರಿಯಿಸಿರುವ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, “ಕರ್ನಾಟಕದ ನಾವೀನ್ಯತೆ ಪರಿಸರ ವ್ಯವಸ್ಥೆ ಸಾಂಪ್ರದಾಯಿಕ ತಂತ್ರಜ್ಞಾನ ಕ್ಷೇತ್ರಗಳನ್ನು ಮೀರಿ ಬೆಳೆಯುತ್ತಿದೆ ಎಂದು ತಿಳಿಸಿದ್ದಾರೆ.

<><><><>

೨೦೨೮ರಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ರಚಿಸುವ ಗುರಿ ಹೊಂದಿದೆ ಎಂದು ರಾಜ್ಯ ಉಸ್ತುವಾರಿ ಹಾಗೂ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹರೀಶ್ ದ್ವಿವೇದಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಮೂರುವರೆ ವರ್ಷ ಅಧಿಕಾರದಲ್ಲಿದ್ದರೂ ಸಾಮಾನ್ಯ ಜನರ ಸಮಸ್ಯೆಗಳನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದ್ದಾರೆ. ತಮ್ಮನ್ನು ರಾಜ್ಯ ಉಸ್ತುವಾರಿಯನ್ನಾಗಿ ನೇಮಿಸಿದ ಬಳಿಕ ಹಲವು ಜವಾಬ್ದಾರಿಯೊಂದಿಗೆ

ಬೆಂಗಳೂರಿಗೆ ನೀಡಿದ ಮೊದಲ ಭೇಟಿಯಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ಮುಂದುವರಿಯಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಮೈತ್ರಿ ಕುರಿತಾದ ನಿರ್ಧಾರಗಳನ್ನು ಪಕ್ಷದ ವರಿಷ್ಠರು ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರಕಾರ ಕೇಂದ್ರದಲ್ಲಿ ಮೂರನೇ ಬಾರಿಗೆ ಅಧಿಕಾರಕ್ಕೆ ಬಂದಿದೆ. ಇದನ್ನು ಸಹಿಸದ ಕಾಂಗ್ರೆಸ್ ಪಕ್ಷ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಹೊರಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಕೋಲಾರದಲ್ಲಿಂದು "ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ" ಪಾದಯಾತ್ರೆಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಹಲವು ಬಾರಿ ಎಸ್‌ಐಆರ್ ನಡೆದಿದೆ. ಆದರೆ ಕಾಂಗ್ರೆಸ್ಸಿನವರಿಗೆ ಎಸ್‌ಐಆರ್, ಇವಿಎಂ ಬಗ್ಗೆ ವಿಶ್ವಾಸವಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಕಳೆದ ೧೦ ವರ್ಷಗಳಲ್ಲಿ ದೇಶದಲ್ಲಿ ೫೬ ಕೋಟಿ ಜನರನ್ನು ಬಡತನ ರೇಖೆಯಿಂದ ಮೇಲಕ್ಕೆತ್ತಲಾಗಿದೆ ಎಂದು ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ ಯುವ ಸಂವಾದದಲ್ಲಿ ಮಾತನಾಡಿದ ಅವರು, ವಿಶ್ವಬ್ಯಾಂಕ್ ಬಿಡುಗಡೆ ಮಾಡಿರುವ ವರದಿ ಪ್ರಕಾರ ಕಳೆದ ಒಂದು ದಶಕದಲ್ಲಿ ಭಾರತದಲ್ಲಿ ೫೬ ಕೋಟಿ ಜನರು ಬಡತನದಿಂದ ಹೊರ ಬಂದಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><><>

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಇದೇ ೫ರಂದು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಇಂಡಿಯಾ ಒಕ್ಕೂಟದ ಪಕ್ಷಗಳು ಪ್ರತಿಭಟನೆ ನಡೆಸಲು ನಿರ್ಧರಿಸಿವೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಜ್ಞಾನೇಶ್‌ಕುಮಾರ್ ರಾಜೀನಾಮೆ ನೀಡುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದ್ದಾರೆ. ಸಿಪಿಐಎಂ ರಾಜ್ಯಕಾರ್ಯದರ್ಶಿ ಕೆ.ಪ್ರಕಾಶ್ ಮಾತನಾಡಿ, ದೇಶದಲ್ಲಿ ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಮತ್ತು ಮುಖ್ಯ ಚುನಾವಣಾಯುಕ್ತರ ನೇಮಕಾತಿ ಪ್ರಕ್ರಿಯೆಯನ್ನು ಪ್ರಜಾಸತ್ತಾತ್ಮಕಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

- ಯುವಜನತೆ ತಮ್ಮಲ್ಲಿರುವ ಪ್ರತಿಭೆ ಹಾಗೂ ವಿಶಿಷ್ಟ ಸಾಮರ್ಥ್ಯವನ್ನು ಸ್ಪರ್ಧೆಗಳ ಮೂಲಕ ಅನಾವರಣಗೊಳಿಸಿ, ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಸಾಧನೆ ಮಾಡುವ ಮೂಲಕ ಮಂಡ್ಯ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಶಾಸಕ ರವಿಕುಮಾರ್ ಪಿ. ಕರೆ ನೀಡಿದ್ದಾರೆ.
- ಯುವ ಜನತೆಯಲ್ಲಿ ಪ್ರಜಾಪ್ರಭುತ್ವ ದಿನಾಚರಣೆ ಮತ್ತು ಸಂವಿಧಾನಾತ್ಮಕ ಮೌಲ್ಯಗಳ ಆಚರಣೆಯ ಮಹತ್ವವನ್ನು ತಿಳಿಸುವ ಸಲುವಾಗಿ ಇದೇ ೬ ರಂದು ಜಿಲ್ಲಾ ಮಟ್ಟದ ಯುವ ಸಂಸತ್ತು ಸಭೆಯನ್ನು ನಡೆಸಲಾಗುವುದು ಎಂದು ಮೈಸೂರಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಬಿಂದ್ಯಾ ಹೆಚ್.ಎಸ್ ತಿಳಿಸಿದ್ದಾರೆ.
- ರಾಯಚೂರು ಜಿಲ್ಲಾ ೧೨ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಇದೇ ೧೪ ಮತ್ತು ೧೫ರಂದು ಆಯೋಜಿಸಲಾಗಿದೆ. ಸಮ್ಮೇಳನದ ಯಶಸ್ಸಿಗೆ ಜಿಲ್ಲೆಯ ಜನಪ್ರತಿನಿಧಿಗಳು, ಸಾಹಿತಿಗಳು, ಸಾರ್ವಜನಿಕರು ಹಾಗೂ ಮಾಧ್ಯಮಗಳ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.
- ದೀಪಾವಳಿ ಪ್ರಯುಕ್ತ ದಾವಣಗೆರೆ ಜಿಲ್ಲೆಯ ಗ್ರಾಮೀಣ ಮಹಿಳಾ ಸ್ವ-ಸಹಾಯ ಸಂಘಗಳ ಸದಸ್ಯರು ಮಣ್ಣಿನಿಂದ ತಯಾರಿಸಿದ ವಿವಿಧ ಬಗೆಯ ದೀಪಗಳ ಮಾರಾಟ ಹಾಗೂ ಸಂಘಗಳನ್ನು ಉತ್ತೇಜಿಸುವ ಉದ್ದೇಶದಿಂದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಯೋಜನೆಯಡಿ ದೀಪ ಸಂಜೀವಿನಿ' ಕಾರ್ಯಕ್ರಮವನ್ನು ನಾಳೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ರೇಷ್ಮಾಕೌಸರ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>